WPF-47

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೭	ಬೆಂಗಳೂರು, ಗುರುವಾರ, ಜೂನ್ ೧೪, ೨೦೧೨ (ಜ್ಯೇಷ್ಠ ೨೪, ಶಕ ವರ್ಷ ೧೯೩೪)	ಸಂಚಿಕೆ ೨೪

ಭಾಗ – ೫

ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

FORM-IV

(SEE RULE-12)

NOTICE

It is hereby notified that the undersigned has changed his name from **Zahida Hashamsab Medur** to **Zahida Shafiulla Honnalli**

P.D.c/n 74 **Zahida Hashamsab Medur**

PUBLIC – NOTICE

BEFORE THE MOTOR ACCIDENT CLAIMS TRIBUNAL, CITY CIVIL & SESSIONS COURT, AHMEDABAD

M.A.C.T 812 OF 2009

APPLICANT :- Patadia Ratilal Bjudardas

Versus

OPPONENT 1. Mohmad Sarif Sarvar
2. Sopi Sumad

Both residing at Kamrul Islam Colony, Plot No. 26, Gulbarga, Karnataka C/o Aadinath Road Lines, Karnataka.

WHEREAS, the applicant has filed claim petition in this Tribunal for compensation of Rs,. 1,70,00,000/- U/s. 166 and Rs. 50,000/- for interim compensation u/s. 140 of M.V. Act on 19-11-2009 for accident caused by Truck No. KA-32-A-7815 at about 13:15 hrs. on Dt. 31-07-2009 at near Pickers in chal, opp-Five Rooms, Anil Starch Road, Ahmedabad and notice of this Tribunal against above opponent has been returned unserved.

This PUBLIC NOTICE is issued by the Tribunal for above Opponents. Take Notice of this claim that it will be heard by the Tribunal on 29-06-2012 at 10-30 a.m. If you does not appear and file your defence, the claim will be decided ex-parte against you.

GIVEN UNDER MY HAND AND SEAL OF THE TRIBUNAL THIS 19TH DAY OF APRIL, 2012.

DRAWN BY	*CHECKED BY*	
S. D. MOTWANI,	S. N. SHELAT,	Dy. Registrar,
Assistant.	Superintendent.	City Civil & Sessions Court,
		Ahmedabad.

PD 64

V-F-1 B/B

ಕರ್ನಾಟಕ ಲೋಕಸೇವಾ ಆಯೋಗ

ಅಧಿಸೂಚನೆ

ಸಂಖ್ಯೆ : ಇ(1) 556/2012-13/ಪಿಎಸ್‌ಸಿ ದಿನಾಂಕ : 25-05-2012.

ಉಲ್ಲೇಖ : 1) ಸರ್ಕಾರದ ಪತ್ರ ಸಂಖ್ಯೆ : ಸಿಆಸುಇ 178 ಸೆನೆನಿ 2010 ದಿನಾಂಕ :29-03-2011

2) ಆಯೋಗದ ಅಧಿಸೂಚನೆ ಸಂಖ್ಯೆ : ಇ(1) 6314/2011-12/ಪಿಎಸ್‌ಸಿ, ದಿನಾಂಕ : 03-11-2011

3) ಸರ್ಕಾರದ ಕಾರ್ಯದರ್ಶಿ, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯವರ ಪತ್ರ ಸಂಖ್ಯೆ : ಅನಾಸ 10 ಕಾಮಾಸೇ 2012, ದಿನಾಂಕ : 06-03-2012.

4) ಸರ್ಕಾರದ ಪತ್ರ ಸಂಖ್ಯೆ : ಸಿಆಸುಇ 178 ಸೆನೆನಿ 2010 ದಿನಾಂಕ : 07-05-2012.

ಉಲ್ಲೇಖ (1)ರಲ್ಲಿನ ಸರ್ಕಾರಿ ಪತ್ರದನ್ವಯ 2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿಗೆ ಸಂಬಂಧಿಸಿದಂತೆ ಉಲ್ಲೇಖ (2)ರಲ್ಲಿನ ಆಯೋಗದ ಅಧಿಸೂಚನೆಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು, 1997ರಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆಯು 'ಸ್ನಾತಕ/ಸ್ನಾತಕೊತ್ತರ ಪದವಿ' ಆಗಿದ್ದು, ಇದು LEGAL METROLOGY ACT, 2009ರಲ್ಲಿ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಅಧಿಕಾರಿಗಳ ನೇಮಕಾತಿಗೆ ನಿಗಧಿಪಡಿಸಿದ ವಿದ್ಯಾರ್ಹತೆಗೆ ಭಿನ್ನವಾಗಿರುತ್ತದೆಯಾದ್ದರಿಂದ ಕಾನೂನು ಮಾಪನ ಶಾಸ್ತ್ರ ಇಲಾಖೆಯ 03 ಸಹಾಯಕ ನಿಯಂತ್ರಕರುಗಳ ಹುದ್ದೆಗಳನ್ನು ದಿನಾಂಕ : 03-11-2011ರ ಆಯೋಗದ ಅಧಿಸೂಚನೆಯಿಂದ ಕೈಬಿಡುವಂತೆ ಉಲ್ಲೇಖ (3)ರ ಆಹಾರ ಮತ್ತು ನಾಗರೀಕ ಇಲಾಖೆಯ ಪತ್ರದಲ್ಲಿ ಕೋರಲಾಗಿದೆ. ಇದನ್ನು ಪರಿಶೀಲಿಸಿ ಸರ್ಕಾರವು ಉಲ್ಲೇಖ (4)ರ ಪತ್ರದಲ್ಲಿ ಸೂಚಿಸಿರುವಂತೆ ಗ್ರೂಪ್-'ಬಿ' ವೃಂದದ ಸಹಾಯಕ ನಿಯಂತ್ರಕರು, ಕಾನೂನು ಮಾಪನ ಶಾಸ್ತ್ರ ಇಲಾಖೆಯ 03 ಹುದ್ದೆಗಳನ್ನು ಆಯೋಗದ ಸದರಿ ಅಧಿಸೂಚನೆಯಿಂದ ಹಿಂತೆಗೆದುಕೊಳ್ಳಲಾಗಿದೆ. ಇದರಿಂದಾಗಿ ಒಟ್ಟು ಹುದ್ದೆಗಳ ಸಂಖ್ಯೆಯು 362 ಆಗಿರುತ್ತದೆ. ಈ ವಿವರವನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಎ. ಬಿ. ಪಾಟೀಲ್, ಭಾ.ಆ.ಸೇ.
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

ಪಿ.ಆರ್. 90

FORM-IV
(SEE RULE-12)
NOTICE

It is hereby notified that the undersigned has changed his name from **Venkatesh Mahalingappa Dombar** to **Venkatesh Mahalingappa Koujalagi.**

P.D.c/n 66 **Venkatesh Mahalingappa Dombar**

FORM-IV
(SEE RULE-12)

It is hereby notified that the undersigned has changed his name from **MALAKAJAPPA DUNDAPPA TOTAD** to **MALAKAJAPPA BASAPPA MUTTATTI.**

P.D. c/n 75 **MALAKAJAPPA DUNDAPPA TOTAD**

ಕರ್ನಾಟಕ ಲೋಕಸೇವಾ ಆಯೋಗದ ಕಛೇರಿ, ಉದ್ಯೋಗ ಸೌಧ, ಬೆಂಗಳೂರು

ತಿದ್ದುಪಡಿ ಅಧಿಸೂಚನೆ

ಸಂಖ್ಯೆ : ಇಪ (2) 113/2012-13/ಪಿಎಸ್‌ಸಿ, ದಿನಾಂಕ 25-05-2012

2011ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳ ಫಲಿತಾಂಶವನ್ನು ದಿನಾಂಕ 12-04-2012 ರ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದ್ದು, ಸದರಿ ಅಧಿವೇಶನದಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂಕಗಳು ಮತ್ತು ಹಿಂದಿನ ಅಧಿವೇಶನಗಳಲ್ಲಿ ಗಳಿಸಿದ ವಿನಾಯಿತಿಗಳನ್ನು ಹಾಗೂ ಬಿ.ಕಾಂ ಪದವಿಯ ಆಧಾರದ ಮೇಲೆ ವಿನಾಯಿತಿ ನೀಡಬೇಕಾಗಿರುವ ಪ್ರಕರಣಗಳನ್ನು ನಿಯಮಾನುಸಾರ ಪರಿಗಣಿಸಿ ತತ್ಸಂಬಂಧ ಅರ್ಹ ಅಭ್ಯರ್ಥಿಗಳ ಫಲಿತಾಂಶವನ್ನು ತಿದ್ದುಪಡಿಯ ಮೂಲಕ ಸಂಬಂಧಿತರ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ.

ಅಪೆಂಡಿಕ್ಸ್ "ಎ"

ಬೆಂಗಳೂರು ಕೇಂದ್ರ,

ಅಕೌಂಟ್ಸ್ ಹೈಯರ್

ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 25102 ನ್ನು ಸೇರಿಸಿ ಓದಿಕೊಳ್ಳುವುದು.

ಮುನಿಸಿಪಲ್ ಅಂಡ್ ಲೋಕಲ್ ಬೋರ್ಡ್ಸ್

ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 26938 ನ್ನು ಸೇರಿಸಿ ಓದಿಕೊಳ್ಳುವುದು.

ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 26521 ನ್ನು ಸೇರಿಸಿ ಓದಿಕೊಳ್ಳುವುದು.

ಎಸ್.ಎ.ಎಸ್. ಭಾಗ–2

ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 25289 ನ್ನು ಸೇರಿಸಿ ಓದಿಕೊಳ್ಳುವುದು.

ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 26829 ನ್ನು ಸೇರಿಸಿ ಓದಿಕೊಳ್ಳುವುದು.

ಎಸ್.ಎ.ಎಸ್. ಭಾಗ–3

ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 25241 ನ್ನು ಸೇರಿಸಿ ಓದಿಕೊಳ್ಳುವುದು.

ಬೀದರ್ ಕೇಂದ್ರ,

ರೆವಿನ್ಯೂ ಲೋಯರ್

ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 32487 ನ್ನು ಸೇರಿಸಿ ಓದಿಕೊಳ್ಳುವುದು.

ಚಾಮರಾಜನಗರ ಕೇಂದ್ರ,

ಅಕೌಂಟ್ಸ್ ಹೈಯರ್

ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 35001 ನ್ನು ಸೇರಿಸಿ ಓದಿಕೊಳ್ಳುವುದು.

ಗುಲ್ಬರ್ಗಾ ಕೇಂದ್ರ,

ಜನರಲ್ ಲಾ ಭಾಗ–1

ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 41651 ನ್ನು ಸೇರಿಸಿ ಓದಿಕೊಳ್ಳುವುದು.

ಗದಗ್ ಕೇಂದ್ರ,

ಅಕೌಂಟ್ಸ್ ಹೈಯರ್

ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 42002 ನ್ನು ಸೇರಿಸಿ ಓದಿಕೊಳ್ಳುವುದು.

ಹಾಸನ ಕೇಂದ್ರ,

ಅಕೌಂಟ್ಸ್ ಹೈಯರ್

ಸಾಮಾನ್ಯ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 43571 ನ್ನು ಸೇರಿಸಿ ಓದಿಕೊಳ್ಳುವುದು.

ಪಿ.ಡಬ್ಲ್ಯೂ.ಡಿ. ಹೈಯರ್ ಭಾಗ–2

ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 43209 ನ್ನು ಸೇರಿಸಿ ಓದಿಕೊಳ್ಳುವುದು.

ರೆವಿನ್ಯೂ ಹೈಯರ್ ಭಾಗ–1

ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 43043 ನ್ನು ಸೇರಿಸಿ ಓದಿಕೊಳ್ಳುವುದು.

ಮಂಡ್ಯ ಕೇಂದ್ರ,

ರೆವಿನ್ಯೂ ಹೈಯರ್ ಭಾಗ–2

ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 49260 ನ್ನು ಸೇರಿಸಿ ಓದಿಕೊಳ್ಳುವುದು.

ಉಡುಪಿ ಕೇಂದ್ರ,

ಅಕೌಂಟ್ಸ್ ಹೈಯರ್

ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದವರಡಿ ನೋಂದಣಿ ಸಂಖ್ಯೆ 58302 ನ್ನು ಸೇರಿಸಿ ಓದಿಕೊಳ್ಳುವುದು.

ಅಪೆಂಡಿಕ್ಸ್ "ಬಿ"

ಬೆಳಗಾವಿ ಕೇಂದ್ರ,

ಕೋ–ಆಪರೇಷನ್

ನೋಂದಣಿ ಸಂಖ್ಯೆ 30296 ನ್ನು ಕೋ–ಆಪರೇಷನ್ ಪತ್ರಿಕೆ–1 ರಲ್ಲಿ ಉತ್ತೀರ್ಣ ಎಂದು ಸೇರಿಸಿ ಓದಿಕೊಳ್ಳುವುದು.

ಎ.ಬಿ. ಪಾಟೀಲ್,

ಕಾರ್ಯದರ್ಶಿ

ಹಾಗೂ ಇಲಾಖಾ ಪರೀಕ್ಷೆಗಳ ನಿಯಂತ್ರಕರು,

ಕರ್ನಾಟಕ ಲೋಕಸೇವಾ ಆಯೋಗ

ಪಿ.ಆರ್. 95

ಕಂದಾಯ ಇಲಾಖೆ

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಹಾಸನ ಜಿಲ್ಲೆ, ಹಾಸನ – 573 201

ನಂ.ಗ್ರಾ.ಲೆ.ಸಿಬ್ಬಂದಿ-106/2010-11, ದಿನಾಂಕ: 13-04-2012

ಅಧಿಕೃತ ಜ್ಞಾಪನ

ವಿಷಯ: ಹಾಸನ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆ ಆದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಕುರಿತು.

ಉಲ್ಲೇಖ:
1) ಸರ್ಕಾರದ ಅಧಿಸೂಚನೆ ಸಂ ಕಂಇ 299 ಬಿಎಸ್‌ಸಿ 2006 ದಿನಾಂಕ: 3/2/2009 ಮತ್ತು ದಿನಾಂಕ: 24/7/2009.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು ರವರ ಪತ್ರದ ಸಂಖ್ಯೆ:ಕಂ.ಇ.04 ಬಿ.ಎಸ್.ಸಿ. 2011 ದಿನಾಂಕ: 25/02/2011.
3) ಈ ಕಚೇರಿಯ ಸಮ ಸಂಖ್ಯೆ ಅಧಿಸೂಚನೆ ದಿನಾಂಕ: 13/05/2011.
4) ಈ ಕಾರ್ಯಾಲಯದ ಆಯ್ಕೆ ಪಟ್ಟಿ ದಿನಾಂಕ: 24-09-2011.

ಹಾಸನ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ 42 ಗ್ರಾಮಲೆಕ್ಕಿಗರ ಹುದ್ದೆಗಳಿಗೆ ನೇರನೇಮಕಾತಿ ಮೂಲಕ ಭರ್ತಿಮಾಡುವ ಸಲುವಾಗಿ ಕರ್ನಾಟಕ ಸಾಮಾನ್ಯ ಸೇವೆಗಳು (ರೆವಿನ್ಯೂ ಸಬಾರ್ಡಿನೇಟ್ ಬ್ರಾಂಚ್, ಕೇಡರ್ ಅಂಡ್ ರಿಕ್ರೂಟ್‌ಮೆಂಟ್) ನಿಯಮಗಳನ್ವಯ ಉಲ್ಲೇಖ(1) ಮತ್ತು (2) ರಲ್ಲಿನ ಸರ್ಕಾರದ ಅಧಿಸೂಚನೆಯಂತೆ ಉಲ್ಲೇಖ(3) ರ ಈ ಕಾರ್ಯಾಲಯದ ಅಧಿಸೂಚನೆಯನ್ವಯ, ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅದರಂತೆ ಅಭ್ಯರ್ಥಿಗಳಿಂದ ಸ್ವೀಕೃತವಾದ ಅರ್ಜಿಗಳನ್ನಾಧರಿಸಿ, ಅರ್ಹತೆ ಮತ್ತು ಮೀಸಲಾತಿಯನ್ವಯ ವಿಂಗಡಿಸಿ 1:10 ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪರಿಶೀಲನಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗಿರುತ್ತದೆ. ಈ ಪರಿಶೀಲನಾ ಪಟ್ಟಿಯ ಬಗ್ಗೆ ಆಕ್ಷೇಪಣೆ/ತಕರಾರು ಅರ್ಜಿಗಳನ್ನು ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಪರಿಶೀಲನಾ ಪಟ್ಟಿಯಲ್ಲಿ ಲಭ್ಯವಾದ ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸಿ ಆಯ್ಕೆ ಪಟ್ಟಿಯನ್ನು ಉಲ್ಲೇಖ (4) ರಂತೆ ಪ್ರಕಟಿಸಲಾಗಿದೆ.

ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ದಿನಾಂಕ: 16-01-2012 ರಂದು ಸಮಾಲೋಚನಾ ಸಭೆ ನಡೆಸಿ ಖಾಲಿ ಹುದ್ದೆಗಳ ಮಾಹಿತಿಯನ್ನು ನೀಡಿ ಅಭ್ಯರ್ಥಿಗಳು ಅಪೇಕ್ಷೆ ಪಟ್ಟಂತಹ ಕಾರ್ಯ ಸ್ಥಳವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.

ಆಯ್ಕೆಯಾಗಿರುವ ಅಭ್ಯರ್ಥಿಗಳ ಮೆರಿಟ್ ಮತ್ತು ವರ್ಗವಾರು ಆಧಾರದ ಮೇಲೆ, ಈ ಕೆಳಕಂಡ ಅಭ್ಯರ್ಥಿಯನ್ನು ಗ್ರಾಮಲೆಕ್ಕಿಗರ ಹುದ್ದೆಯ ವೇತನ ಶ್ರೇಣಿಯ 5800-100-6000-125-6500-150-7100-175-7800-200-8600-225-9500-250-10500 ರಲ್ಲಿ ನೇಮಕಾತಿ ಮಾಡಿ ಆದೇಶಿಸಿರುತ್ತದೆ.

ಅಭ್ಯರ್ಥಿಯ ಹೆಸರು	ತಂದೆಯ ಹೆಸರು	ವಿಳಾಸ	ನೇಮಕಾತಿ ಮಾಡಿರುವ ವೃತ್ತದ ಹೆಸರು
ಉಮ ಗಂಗಪ್ಪಳವರ	ಲೋಕಪ್ಪ	ಹೊಸಹಳ್ಳಿ ಗ್ರಾಮ, ಇಂಗಲಗೊಂಡಿ ಅಂಚೆ, ಹಿರಿಕೆರೂರು ತಾಲ್ಲೂಕು, ಹಾವೇರಿ-581111.	ಅರಸೀಕೆರೆ ತಾಲ್ಲೂಕು, ಆದೀಹಳ್ಳಿ ವೃತ್ತ.

ಷರತ್ತುಗಳು

1. ಅಭ್ಯರ್ಥಿಯು ಈ ಆದೇಶ ತಲುಪಿದ 15 ದಿನಗಳೊಳಗೆ ಮೂಲ ದಾಖಲಾತಿಗಳೊಂದಿಗೆ ಸಂಬಂಧಿಸಿದ ತಹಶೀಲ್ದಾರರ ಸಮಕ್ಷಮದಲ್ಲಿ ವರದಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) 1977ರ ನಿಯಮ 18ರನ್ವಯ ನೇಮಕಾತಿಯನ್ನು ರದ್ದುಪಡಿಸಲಾಗುತ್ತದೆ.
2. ಅಭ್ಯರ್ಥಿಯು ವಾಸಿಸುತ್ತಿರುವ ಕ್ಷೇತ್ರಕ್ಕೆ ಸಂಬಂಧಿಸಿದ ಇಬ್ಬರು ಗಣ್ಯ ವ್ಯಕ್ತಿಗಳಿಂದ ನೀಡಲ್ಪಟ್ಟ ನಡತೆ ಪ್ರಮಾಣ ಪತ್ರಗಳನ್ನು ಹಾಜರುಪಡಿಸುವುದು.
3. ಈ ನೇಮಕಾತಿಯು ಅಭ್ಯರ್ಥಿಯು ಹಾಜರುಪಡಿಸಿರುವ ಪಿ.ಯು.ಸಿ. ಅಂಕ ಪಟ್ಟಿಯ ಸತ್ಯಾಪನೆಗೆ ಒಳಪಟ್ಟಿರುತ್ತದೆ.
4. ಅಭ್ಯರ್ಥಿಯು ಸಲ್ಲಿಸುವ ಮೂಲ ದಾಖಲಾತಿಗಳಲ್ಲಿ ತಪ್ಪು ಮಾಹಿತಿ ಅಥವಾ ಸುಳ್ಳು ಎಂದು ಕಂಡು ಬಂದಲ್ಲಿ ಅಂತಹವರ ಆಯ್ಕೆಯನ್ನು ರದ್ದುಪಡಿಸಲಾಗುತ್ತದೆ.
5. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ 2 ವರ್ಷಗಳ ಅವಧಿಯು ಪರಿವೀಕ್ಷಣೆ ಅವಧಿ (Probation Period) ಯಾಗಿರುತ್ತದೆ. ಈ ಅವಧಿಯಲ್ಲಿ (1) ಅಕೌಂಟ್ಸ್ ಲೋಯರ್ 2) ರೆವಿನ್ಯೂ ಲೋಯರ್ ಮತ್ತು ಕನ್ನಡ ಭಾಷಾ ಪರೀಕ್ಷೆ (SSLC ಯಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ತೆಗೆದುಕೊಳ್ಳದಿದ್ದಲ್ಲಿ) ಗಳಲ್ಲಿ ಉತ್ತೀರ್ಣರಾಗುವುದು. ತಪ್ಪಿದಲ್ಲಿ ಹಾಗೂ ಕೆಲಸ ಕಾರ್ಯಗಳು ತೃಪ್ತಿಕರವಾಗಿರದಿದ್ದಲ್ಲಿ ಸೇವೆಯಿಂದ ತೆಗೆದು ಹಾಕಲಾಗುವುದು.
6. ಅಭ್ಯರ್ಥಿಯು ಸೇವೆಗೆ ಹಾಜರಾಗಿ ಭಾರತ ಸಂವಿಧಾನದ ರೀತ್ಯಾ "ನಿಷ್ಠೆಯ ಪ್ರಮಾಣ ವಚನ ಸ್ವೀಕರಿಸುವುದು."
7. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವ ಸಮಯದಲ್ಲಿ ಸರ್ಕಾರಿ ವೈದ್ಯರಿಂದ ಪಡೆದ ವೈದ್ಯಕೀಯ ಅರ್ಹತಾ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು.

8. ಅಭ್ಯರ್ಥಿಯು ಸರ್ಕಾರದ ಆದೇಶ ನಂ. FD/SPL/04/PET/05 ದಿನಾಂಕ 31/03/2006 ರಂತೆ ಹೊಸ ನಿವೃತ್ತಿ ವೇತನ ಯೋಜನೆಗೆ ಒಳಪಟ್ಟಿರುತ್ತಾರೆ.
9. ಸರ್ಕಾರದ ಸುತ್ತೋಲೆ ಸಂ.ಕಂ.ಇ/54/ಬಿಎಸ್‌ಸಿ/2007, ದಿನಾಂಕ: 27/3/2007 ರನ್ವಯ ಅಂತರ ಜಿಲ್ಲಾ ವರ್ಗಾವಣೆಗೆ ಹಾಸನ ಜಿಲ್ಲೆಯಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಕಡ್ಡಾಯವಾಗಿ ಪೂರೈಸತಕ್ಕದ್ದು.
10. ಅಭ್ಯರ್ಥಿಗಳು, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966 ಹಾಗೂ ಕರ್ನಾಟಕ ನಾಗರೀಕ ಸೇವೆ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಗಳು 1957 ಹಾಗೂ ಕಾಲಕಾಲಕ್ಕೆ ಸರ್ಕಾರದಿಂದ ಹೊರಡಿಸಲಾಗುವ ಇತರೆ ನಿಯಮಾವಳಿಗಳಿಗೆ ಬದ್ಧರಾಗಿರುತ್ತಾರೆ.
11. ಅಭ್ಯರ್ಥಿಯು ರೂ. 1000/- ಭದ್ರತಾ ಠೇವಣಿಯನ್ನು ರಾಷ್ಟ್ರೀಯ ಉಳಿತಾಯ ಪತ್ರದ ಮೂಲಕ ಸಂಬಂಧಪಟ್ಟ ತಹಶೀಲ್ದಾರರಲ್ಲಿ ಹಾಜರುಪಡಿಸುವುದು ಹಾಗೂ ತಹಶೀಲ್ದಾರರು ಈ ಮೊತ್ತಕ್ಕೆ ಭದ್ರತಾ ಮುಚ್ಚಳಿಕೆ ಪತ್ರವನ್ನು ಪಡೆದು ಸರ್ಕಾರಕ್ಕೆ ಆಧಾರ ಮಾಡಿಕೊಳ್ಳುವುದು.
12. ಅಭ್ಯರ್ಥಿಯ ಜೇಷ್ಠತೆಯು ನೇಮಕಾತಿ ಪ್ರಾಧಿಕಾರದ ಉಲ್ಲೇಖ (4) ರಲ್ಲಿನ ಆಯ್ಕೆ ಪಟ್ಟಿಯಲ್ಲಿ ಪ್ರಸ್ತುತ ಇದ್ದಂತೆಯೇ ಇರತಕ್ಕದ್ದು ಹಾಗೂ ತದನಂತರ ಈ ಸಂಬಂಧ ಸರ್ಕಾರ ಹೊರಡಿಸುವ ಕಾನೂನು ತಿದ್ದುಪಡಿಗಳಿಗೆ ಒಳಪಟ್ಟಿರುತ್ತದೆ.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇಮಕಾತಿ ಸಮಿತಿ

ಹಾಸನ ಜಿಲ್ಲೆ, ಹಾಸನ.

ಕಂದಾಯ ಇಲಾಖೆ

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಹಾಸನ ಜಿಲ್ಲೆ, ಹಾಸನ – 573 201

ನಂ.ಗ್ರಾ.ಲೆ.ಸಿಬ್ಬಂದಿ–106/2010–11, ದಿನಾಂಕ: 13–04–2012

ಅಧಿಕೃತ ಜ್ಞಾಪನ

ವಿಷಯ: ಹಾಸನ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆ ಆದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಕುರಿತು.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂ ಕಂಇ 299 ಬಿಎಸ್‌ಸಿ 2006 ದಿನಾಂಕ: 3/2/2009 ಮತ್ತು ದಿನಾಂಕ: 24/7/2009.

2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು ರವರ ಪತ್ರದ ಸಂಖ್ಯೆ: ಕಂ.ಇ.04 ಬಿ.ಎಸ್.ಸಿ. 2011 ದಿನಾಂಕ: 25/02/2011.

3) ಈ ಕಚೇರಿಯ ಸಮ ಸಂಖ್ಯೆ ಅಧಿಸೂಚನೆ ದಿನಾಂಕ: 13/05/2011.

4) ಈ ಕಾರ್ಯಾಲಯದ ಆಯ್ಕೆ ಪಟ್ಟಿ ದಿನಾಂಕ: 24-09-2011.

ಹಾಸನ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ 42 ಗ್ರಾಮಲೆಕ್ಕಿಗರ ಹುದ್ದೆಗಳಿಗೆ ನೇರನೇಮಕಾತಿ ಮೂಲಕ ಭರ್ತಿಮಾಡುವ ಸಲುವಾಗಿ ಕರ್ನಾಟಕ ಸಾಮಾನ್ಯ ಸೇವೆಗಳು (ರೆವೆನ್ಯೂ ಸಬಾರ್ಡಿನೇಟ್ ಬ್ರಾಂಚ್, ಕೇಡರ್ ಅಂಡ್ ರಿಕ್ರೂಟ್‌ಮೆಂಟ್) ನಿಯಮಗಳನ್ವಯ ಉಲ್ಲೇಖ(1) ಮತ್ತು (2) ರಲ್ಲಿನ ಸರ್ಕಾರದ ಅಧಿಸೂಚನೆಯಂತೆ ಉಲ್ಲೇಖ(3) ರ ಈ ಕಾರ್ಯಾಲಯದ ಅಧಿಸೂಚನೆಯನ್ವಯ, ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು, ಅದರಂತೆ ಅಭ್ಯರ್ಥಿಗಳಿಂದ ಸ್ವೀಕೃತವಾದ ಅರ್ಜಿಗಳನ್ನಾಧರಿಸಿ, ಅರ್ಹತೆ ಮತ್ತು ಮೀಸಲಾತಿಯನ್ವಯ ವಿಂಗಡಿಸಿ 1:10 ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪರಿಶೀಲನಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗಿರುತ್ತದೆ. ಈ ಪರಿಶೀಲನಾ ಪಟ್ಟಿಯ ಬಗ್ಗೆ ಆಕ್ಷೇಪಣೆ/ತಕರಾರು ಅರ್ಜಿಗಳನ್ನು ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಪರಿಶೀಲನಾ ಪಟ್ಟಿಯಲ್ಲಿ ಲಭ್ಯವಾದ ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸಿ ಆಯ್ಕೆ ಪಟ್ಟಿಯನ್ನು ಉಲ್ಲೇಖ (4) ರಂತೆ ಪ್ರಕಟಿಸಲಾಗಿದೆ.

ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ದಿನಾಂಕ: 16-01-2012 ರಂದು ಸಮಾಲೋಚನಾ ಸಭೆ ನಡೆಸಿ ಖಾಲಿ ಹುದ್ದೆಗಳ ಮಾಹಿತಿಯನ್ನು ನೀಡಿ ಅಭ್ಯರ್ಥಿಗಳು ಆಪೇಕ್ಷೆ ಪಟ್ಟಂತಹ ಕಾರ್ಯ ಸ್ಥಳವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.

ಆಯ್ಕೆಯಾಗಿರುವ ಅಭ್ಯರ್ಥಿಗಳ ಮೆರಿಟ್ ಮತ್ತು ವರ್ಗವಾರು ಆಧಾರದ ಮೇಲೆ, ಈ ಕೆಳಕಂಡ ಅಭ್ಯರ್ಥಿಯನ್ನು ಗ್ರಾಮಲೆಕ್ಕಿಗರ ಹುದ್ದೆಯ ವೇತನ ಶ್ರೇಣಿಯ 5800-100-6000-125-6500-150-7100-175-7800-200-8600-225-9500-250-10500 ರಲ್ಲಿ ನೇಮಕಾತಿ ಮಾಡಿ ಆದೇಶಿಸಿರುತ್ತದೆ.

ಅಭ್ಯರ್ಥಿಯ ಹೆಸರು	ತಂದೆಯ ಹೆಸರು	ವಿಳಾಸ	ನೇಮಕಾತಿ ಮಾಡಿರುವ ವೃತ್ತದ ಹೆಸರು
ಸಣ್ಣಮಹದೇವ ಬಜಂತ್ರಿ	ಯಲ್ಲಪ್ಪ	ಕಾಟ್‌ಕೊಲ್, ರಾಮದುರ್ಗ, ಬೆಳಗಾಂ-591114	ಹಾಸನ ತಾಲ್ಲೂಕು, ಕಾರೇಕೆರೆ ವೃತ್ತ.

ಷರತ್ತುಗಳು

1. ಅಭ್ಯರ್ಥಿಯು ಈ ಆದೇಶ ತಲುಪಿದ 15 ದಿನಗಳೊಳಗೆ ಮೂಲ ದಾಖಲಾತಿಗಳೊಂದಿಗೆ ಸಂಬಂಧಿಸಿದ ತಹಶೀಲ್ದಾರರ ಸಮಕ್ಷಮದಲ್ಲಿ ವರದಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) 1977ರ ನಿಯಮ 18ರನ್ವಯ ನೇಮಕಾತಿಯನ್ನು ರದ್ದುಪಡಿಸಲಾಗುತ್ತದೆ.

2. ಅಭ್ಯರ್ಥಿಯು ವಾಸಿಸುತ್ತಿರುವ ಕ್ಷೇತ್ರಕ್ಕೆ ಸಂಬಂಧಿಸಿದ ಇಬ್ಬರು ಗಣ್ಯ ವ್ಯಕ್ತಿಗಳಿಂದ ನೀಡಲ್ಪಟ್ಟ ನಡತೆ ಪ್ರಮಾಣ ಪತ್ರಗಳನ್ನು ಹಾಜರುಪಡಿಸುವುದು.
3. ಈ ನೇಮಕಾತಿಯು ಅಭ್ಯರ್ಥಿಯು ಹಾಜರುಪಡಿಸಿರುವ ಪಿ.ಯು.ಸಿ. ಅಂಕ ಪಟ್ಟಿಯ ಸತ್ಯಾಪನೆಗೆ ಒಳಪಟ್ಟಿರುತ್ತದೆ.
4. ಅಭ್ಯರ್ಥಿಯು ಸಲ್ಲಿಸುವ ಮೂಲ ದಾಖಲಾತಿಗಳಲ್ಲಿ ತಪ್ಪು ಮಾಹಿತಿ ಅಥವಾ ಸುಳ್ಳು ಎಂದು ಕಂಡು ಬಂದಲ್ಲಿ ಅಂತಹವರ ಆಯ್ಕೆಯನ್ನು ರದ್ದುಪಡಿಸಲಾಗುತ್ತದೆ.
5. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ 2 ವರ್ಷಗಳ ಅವಧಿಯು ಪರಿವೀಕ್ಷಣೆ ಅವಧಿ (Probation Period) ಯಾಗಿರುತ್ತದೆ. ಈ ಅವಧಿಯಲ್ಲಿ (1) ಅಕೌಂಟ್ಸ್ ಲೋಯರ್ 2) ರೆವಿನ್ಯೂ ಲೋಯರ್ ಮತ್ತು ಕನ್ನಡ ಭಾಷಾ ಪರೀಕ್ಷೆ (SSLC ಯಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ತೆಗೆದುಕೊಳ್ಳದಿದ್ದಲ್ಲಿ) ಗಳಲ್ಲಿ ಉತ್ತೀರ್ಣರಾಗುವುದು. ತಪ್ಪಿದಲ್ಲಿ ಹಾಗೂ ಕೆಲಸ ಕಾರ್ಯಗಳು ತೃಪ್ತಿಕರವಾಗಿರದಿದ್ದಲ್ಲಿ ಸೇವೆಯಿಂದ ತೆಗೆದು ಹಾಕಲಾಗುವುದು.
6. ಅಭ್ಯರ್ಥಿಯು ಸೇವೆಗೆ ಹಾಜರಾಗಿ ಭಾರತ ಸಂವಿಧಾನದ ರೀತ್ಯಾ "ನಿಷ್ಠೆಯ ಪ್ರಮಾಣ ವಚನ ಸ್ವೀಕರಿಸುವುದು."
7. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವ ಸಮಯದಲ್ಲಿ ಸರ್ಕಾರಿ ವೈದ್ಯರಿಂದ ಪಡೆದ ವೈದ್ಯಕೀಯ ಅರ್ಹತಾ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು.
8. ಅಭ್ಯರ್ಥಿಯು ಸರ್ಕಾರದ ಆದೇಶ ನಂ. FD/SPL/04/PET/05 ದಿನಾಂಕ 31/03/2006 ರಂತೆ ಹೊಸ ನಿವೃತ್ತಿ ವೇತನ ಯೋಜನೆಗೆ ಒಳಪಟ್ಟಿರುತ್ತಾರೆ.
9. ಸರ್ಕಾರದ ಸುತ್ತೋಲೆ ಸಂ.ಕಂ.ಇ/54/ಬಿಎಸ್‌ಸಿ/2007, ದಿನಾಂಕ: 27/3/2007 ರನ್ವಯ ಅಂತರ ಜಿಲ್ಲಾ ವರ್ಗಾವಣೆಗೆ ಹಾಸನ ಜಿಲ್ಲೆಯಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಕಡ್ಡಾಯವಾಗಿ ಪೂರೈಸತಕ್ಕದ್ದು.
10. ಅಭ್ಯರ್ಥಿಗಳು, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966 ಹಾಗೂ ಕರ್ನಾಟಕ ನಾಗರೀಕ ಸೇವೆ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಗಳು 1957 ಹಾಗೂ ಕಾಲಕಾಲಕ್ಕೆ ಸರ್ಕಾರದಿಂದ ಹೊರಡಿಸಲಾಗುವ ಇತರೆ ನಿಯಮಾವಳಿಗಳಿಗೆ ಬದ್ಧರಾಗಿರುತ್ತಾರೆ.
11. ಅಭ್ಯರ್ಥಿಯು ರೂ. 1000/- ಭದ್ರತಾ ಠೇವಣಿಯನ್ನು ರಾಷ್ಟ್ರೀಯ ಉಳಿತಾಯ ಪತ್ರದ ಮೂಲಕ ಸಂಬಂಧಪಟ್ಟ ತಹಶೀಲ್ದಾರರಲ್ಲಿ ಹಾಜರುಪಡಿಸುವುದು ಹಾಗೂ ತಹಶೀಲ್ದಾರರು ಈ ಮೊತ್ತಕ್ಕೆ ಭದ್ರತಾ ಮುಚ್ಚಳಿಕೆ ಪತ್ರವನ್ನು ಪಡೆದು ಸರ್ಕಾರಕ್ಕೆ ಆಧಾರ ಮಾಡಿಕೊಳ್ಳುವುದು.
12. ಅಭ್ಯರ್ಥಿಯ ಜೇಷ್ಠತೆಯು ನೇಮಕಾತಿ ಪ್ರಾಧಿಕಾರದ ಉಲ್ಲೇಖ (4) ರಲ್ಲಿನ ಆಯ್ಕೆ ಪಟ್ಟಿಯಲ್ಲಿ ಪ್ರಸ್ತುತ ಇದ್ದಂತೆಯೇ ಇರತಕ್ಕದ್ದು ಹಾಗೂ ತದನಂತರ ಈ ಸಂಬಂಧ ಸರ್ಕಾರ ಹೊರಡಿಸುವ ಕಾನೂನು ತಿದ್ದುಪಡಿಗಳಿಗೆ ಒಳಪಟ್ಟಿರುತ್ತದೆ.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇಮಕಾತಿ ಸಮಿತಿ
ಹಾಸನ ಜಿಲ್ಲೆ, ಹಾಸನ.

ಕಂದಾಯ ಇಲಾಖೆ

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಹಾಸನ ಜಿಲ್ಲೆ, ಹಾಸನ – 573 201
ನಂ.ಗ್ರಾ.ಲೆ.ಸಿಬ್ಬಂದಿ-106/2010-11, ದಿನಾಂಕ: 13-04-2012
ಅಧಿಕೃತ ಜ್ಞಾಪನ

ವಿಷಯ: ಹಾಸನ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆ ಆದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಕುರಿತು.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂ ಕಂಇ 299 ಬಿಎಸ್‌ಸಿ 2006 ದಿನಾಂಕ: 3/2/2009 ಮತ್ತು ದಿನಾಂಕ: 24/7/2009.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು ರವರ ಪತ್ರದ ಸಂಖ್ಯೆ:ಕಂ.ಇ.04 ಬಿ.ಎಸ್.ಸಿ. 2011 ದಿನಾಂಕ: 25/02/2011.
3) ಈ ಕಚೇರಿಯ ಸಮ ಸಂಖ್ಯೆ ಅಧಿಸೂಚನೆ ದಿನಾಂಕ: 13/05/2011.
4) ಈ ಕಾರ್ಯಾಲಯದ ಆಯ್ಕೆ ಪಟ್ಟಿ ದಿನಾಂಕ: 24-09-2011.

ಹಾಸನ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ 42 ಗ್ರಾಮಲೆಕ್ಕಿಗರ ಹುದ್ದೆಗಳಿಗೆ ನೇರನೇಮಕಾತಿ ಮೂಲಕ ಭರ್ತಿಮಾಡುವ ಸಲುವಾಗಿ ಕರ್ನಾಟಕ ಸಾಮಾನ್ಯ ಸೇವೆಗಳು (ರೆವೆನ್ಯೂ ಸಬಾರ್ಡಿನೇಟ್ ಬ್ರಾಂಚ್, ಕೇಡರ್ ಅಂಡ್ ರಿಕ್ರೂಟ್‌ಮೆಂಟ್) ನಿಯಮಗಳನ್ವಯ ಉಲ್ಲೇಖ(1) ಮತ್ತು (2) ರಲ್ಲಿನ ಸರ್ಕಾರದ ಅಧಿಸೂಚನೆಯಂತೆ ಉಲ್ಲೇಖ(3) ರ ಈ ಕಾರ್ಯಾಲಯದ ಅಧಿಸೂಚನೆಯನ್ವಯ, ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅದರಂತೆ ಅಭ್ಯರ್ಥಿಗಳಿಂದ ಸ್ವೀಕೃತವಾದ ಅರ್ಜಿಗಳನ್ನಾಧರಿಸಿ, ಅರ್ಹತೆ ಮತ್ತು ಮೀಸಲಾತಿಯನ್ವಯ ವಿಂಗಡಿಸಿ 1:10 ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪರಿಶೀಲನಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗಿರುತ್ತದೆ. ಈ ಪರಿಶೀಲನಾ ಪಟ್ಟಿಯ ಬಗ್ಗೆ ಆಕ್ಷೇಪಣೆ/ತಕರಾರು ಅರ್ಜಿಗಳನ್ನು ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಪರಿಶೀಲನಾ ಪಟ್ಟಿಯಲ್ಲಿ ಲಭ್ಯವಾದ ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸಿ ಆಯ್ಕೆ ಪಟ್ಟಿಯನ್ನು ಉಲ್ಲೇಖ (4) ರಂತೆ ಪ್ರಕಟಿಸಲಾಗಿದೆ.

ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ದಿನಾಂಕ: 17-10-2011 ರಂದು ಸಮಾಲೋಚನಾ ಸಭೆ ನಡೆಸಿ ಖಾಲಿ ಹುದ್ದೆಗಳ ಮಾಹಿತಿಯನ್ನು ನೀಡಿ ಅಭ್ಯರ್ಥಿಗಳು ಆಪೇಕ್ಷೆಪಟ್ಟಂತಹ ಕಾರ್ಯ ಸ್ಥಳವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.

ಆಯ್ಕೆಯಾಗಿರುವ ಅಭ್ಯರ್ಥಿಗಳ ಮೆರಿಟ್ ಮತ್ತು ವರ್ಗವಾರು ಆಧಾರದ ಮೇಲೆ, ಈ ಕೆಳಕಂಡ ಅಭ್ಯರ್ಥಿಯನ್ನು ಗ್ರಾಮಲೆಕ್ಕಿಗರ ಹುದ್ದೆಯ ವೇತನ ಶ್ರೇಣಿಯ 5800-100-6000-125-6500-150-7100-175-7800-200-8600-225-9500-250-10500 ರಲ್ಲಿ ನೇಮಕಾತಿ ಮಾಡಿ ಆದೇಶಿಸಿರುತ್ತದೆ.

ಅಭ್ಯರ್ಥಿಯ ಹೆಸರು	ತಂದೆಯ ಹೆಸರು	ವಿಳಾಸ	ನೇಮಕಾತಿ ಮಾಡಿರುವ ವೃತ್ತದ ಹೆಸರು
ಪುಷ್ಪ ಮಲ್ಲಿಕಾರ್ಜುನ ಕುಂಬಾರ	ಮಲ್ಲಿಕಾರ್ಜುನ	ಕೆರಿ ಓಣಿ, ಹಿರಿಬಾಗೇವಾಡಿ, ಬೆಳಗಾಂ ತಾಲ್ಲೂಕು, ಬೆಳಗಾಂ-591109.	ಹೊಳೆನರಸೀಪುರ ತಾಲ್ಲೂಕು, ಭೂಮಿ ಕೇಂದ್ರ.

ಷರತ್ತುಗಳು

1. ಅಭ್ಯರ್ಥಿಯು ಈ ಆದೇಶ ತಲುಪಿದ 15 ದಿನಗಳೊಳಗೆ ಮೂಲ ದಾಖಲಾತಿಗಳೊಂದಿಗೆ ಸಂಬಂಧಿಸಿದ ತಹಶೀಲ್ದಾರರ ಸಮಕ್ಷಮದಲ್ಲಿ ವರದಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) 1977ರ ನಿಯಮ 18ರನ್ವಯ ನೇಮಕಾತಿಯನ್ನು ರದ್ದುಪಡಿಸಲಾಗುತ್ತದೆ.
2. ಅಭ್ಯರ್ಥಿಯು ವಾಸಿಸುತ್ತಿರುವ ಕ್ಷೇತ್ರಕ್ಕೆ ಸಂಬಂಧಿಸಿದ ಇಬ್ಬರು ಗಣ್ಯ ವ್ಯಕ್ತಿಗಳಿಂದ ನೀಡಲ್ಪಟ್ಟ ನಡತೆ ಪ್ರಮಾಣ ಪತ್ರಗಳನ್ನು ಹಾಜರುಪಡಿಸುವುದು.
3. ಈ ನೇಮಕಾತಿಯು ಅಭ್ಯರ್ಥಿಯು ಹಾಜರುಪಡಿಸಿರುವ ಪಿ.ಯು.ಸಿ. ಅಂಕ ಪಟ್ಟಿಯ ಸತ್ಯಾಪನೆಗೆ ಒಳಪಟ್ಟಿರುತ್ತದೆ.
4. ಅಭ್ಯರ್ಥಿಯು ಸಲ್ಲಿಸುವ ಮೂಲ ದಾಖಲಾತಿಗಳಲ್ಲಿ ತಪ್ಪು ಮಾಹಿತಿ ಅಥವಾ ಸುಳ್ಳು ಎಂದು ಕಂಡು ಬಂದಲ್ಲಿ ಅಂತಹವರ ಆಯ್ಕೆಯನ್ನು ರದ್ದುಪಡಿಸಲಾಗುತ್ತದೆ.
5. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ 2 ವರ್ಷಗಳ ಅವಧಿಯು ಪರಿವೀಕ್ಷಣೆ ಅವಧಿ (Probation Period) ಯಾಗಿರುತ್ತದೆ. ಈ ಅವಧಿಯಲ್ಲಿ (1) ಅಕೌಂಟ್ಸ್ ಲೋಯರ್ 2) ರೆವಿನ್ಯೂ ಲೋಯರ್ ಮತ್ತು ಕನ್ನಡ ಭಾಷಾ ಪರೀಕ್ಷೆ (SSLC ಯಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ತೆಗೆದುಕೊಳ್ಳದಿದ್ದಲ್ಲಿ) ಗಳಲ್ಲಿ ಉತ್ತೀರ್ಣರಾಗುವುದು. ತಪ್ಪಿದಲ್ಲಿ ಹಾಗೂ ಕೆಲಸ ಕಾರ್ಯಗಳು ತೃಪ್ತಿಕರವಾಗಿರದಿದ್ದಲ್ಲಿ ಸೇವೆಯಿಂದ ತೆಗೆದು ಹಾಕಲಾಗುವುದು.
6. ಅಭ್ಯರ್ಥಿಯು ಸೇವೆಗೆ ಹಾಜರಾಗಿ ಭಾರತ ಸಂವಿಧಾನದ ರೀತ್ಯಾ "ನಿಷ್ಠೆಯ ಪ್ರಮಾಣ ವಚನ ಸ್ವೀಕರಿಸುವುದು."
7. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವ ಸಮಯದಲ್ಲಿ ಸರ್ಕಾರಿ ವೈದ್ಯರಿಂದ ಪಡೆದ ವೈದ್ಯಕೀಯ ಅರ್ಹತಾ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು.
8. ಅಭ್ಯರ್ಥಿಯು ಸರ್ಕಾರದ ಆದೇಶ ನಂ. FD/SPL/04/PET/05 ದಿನಾಂಕ 31/03/2006 ರಂತೆ ಹೊಸ ನಿವೃತ್ತಿ ವೇತನ ಯೋಜನೆಗೆ ಒಳಪಟ್ಟಿರುತ್ತಾರೆ.
9. ಸರ್ಕಾರದ ಸುತ್ತೋಲೆ ಸಂ.ಕಂ.ಇ/54/ಬಿಎಸ್‌ಸಿ/2007, ದಿನಾಂಕ: 27/3/2007 ರನ್ವಯ ಅಂತರ ಜಿಲ್ಲಾ ವರ್ಗಾವಣೆಗೆ ಹಾಸನ ಜಿಲ್ಲೆಯಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಕಡ್ಡಾಯವಾಗಿ ಪೂರೈಸತಕ್ಕದ್ದು.
10. ಅಭ್ಯರ್ಥಿಗಳು, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966 ಹಾಗೂ ಕರ್ನಾಟಕ ನಾಗರೀಕ ಸೇವೆ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಗಳು 1957 ಹಾಗೂ ಕಾಲಕಾಲಕ್ಕೆ ಸರ್ಕಾರದಿಂದ ಹೊರಡಿಸಲಾಗುವ ಇತರೆ ನಿಯಮಾವಳಿಗಳಿಗೆ ಬದ್ಧರಾಗಿರುತ್ತಾರೆ.
11. ಅಭ್ಯರ್ಥಿಯು ರೂ. 1000/- ಭದ್ರತಾ ಠೇವಣಿಯನ್ನು ರಾಷ್ಟ್ರೀಯ ಉಳಿತಾಯ ಪತ್ರದ ಮೂಲಕ ಸಂಬಂಧಪಟ್ಟ ತಹಶೀಲ್ದಾರರಲ್ಲಿ ಹಾಜರುಪಡಿಸುವುದು ಹಾಗೂ ತಹಶೀಲ್ದಾರರು ಈ ಮೊತ್ತಕ್ಕೆ ಭದ್ರತಾ ಮುಚ್ಚಳಿಕೆ ಪತ್ರವನ್ನು ಪಡೆದು ಸರ್ಕಾರಕ್ಕೆ ಆಧಾರ ಮಾಡಿಕೊಳ್ಳುವುದು.
12. ಅಭ್ಯರ್ಥಿಯ ಜೇಷ್ಠತೆಯು ನೇಮಕಾತಿ ಪ್ರಾಧಿಕಾರದ ಉಲ್ಲೇಖ (4) ರಲ್ಲಿನ ಆಯ್ಕೆ ಪಟ್ಟಿಯಲ್ಲಿ ಪ್ರಸ್ತುತ ಇದ್ದಂತೆಯೇ ಇರತಕ್ಕದ್ದು ಹಾಗೂ ತದನಂತರ ಈ ಸಂಬಂಧ ಸರ್ಕಾರ ಹೊರಡಿಸುವ ಕಾನೂನು ತಿದ್ದುಪಡಿಗಳಿಗೆ ಒಳಪಟ್ಟಿರುತ್ತದೆ.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇಮಕಾತಿ ಸಮಿತಿ
ಹಾಸನ ಜಿಲ್ಲೆ, ಹಾಸನ.

ಕಂದಾಯ ಇಲಾಖೆ

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಹಾಸನ ಜಿಲ್ಲೆ, ಹಾಸನ – 573 201

ನಂ.ಗ್ರಾಲೆ.ಸಿಬ್ಬಂದಿ-106/2010-11, ದಿನಾಂಕ: 13-04-2012

ಅಧಿಕೃತ ಜ್ಞಾಪನ

ವಿಷಯ: ಹಾಸನ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆ ಆದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಕುರಿತು.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 299 ಬಿಎಸ್‌ಸಿ 2006 ದಿನಾಂಕ: 3/2/2009 ಮತ್ತು ದಿನಾಂಕ: 24/7/2009.

2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು ರವರ ಪತ್ರದ ಸಂಖ್ಯೆ: ಕಂ.ಇ.04 ಬಿ.ಎಸ್.ಸಿ. 2011 ದಿನಾಂಕ: 25/02/2011.

3) ಈ ಕಚೇರಿಯ ಸಮ ಸಂಖ್ಯೆ ಅಧಿಸೂಚನೆ ದಿನಾಂಕ: 13/05/2011.

4) ಈ ಕಾರ್ಯಾಲಯದ ಆಯ್ಕೆ ಪಟ್ಟಿ ದಿನಾಂಕ: 24-09-2011.

ಹಾಸನ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ 42 ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿಮಾಡುವ ಸಲುವಾಗಿ ಕರ್ನಾಟಕ ಸಾಮಾನ್ಯ ಸೇವೆಗಳು (ರೆವೆನ್ಯೂ ಸಬಾರ್ಡಿನೇಟ್ ಬ್ರಾಂಚ್, ಕೇಡರ್ ಅಂಡ್ ರಿಕ್ರೂಟ್‌ಮೆಂಟ್) ನಿಯಮಗಳನ್ವಯ ಉಲ್ಲೇಖ(1) ಮತ್ತು (2) ರಲ್ಲಿನ ಸರ್ಕಾರದ ಅಧಿಸೂಚನೆಯಂತೆ ಉಲ್ಲೇಖ(3) ರ ಈ ಕಾರ್ಯಾಲಯದ ಅಧಿಸೂಚನೆಯನ್ವಯ, ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅದರಂತೆ ಅಭ್ಯರ್ಥಿಗಳಿಂದ ಸ್ವೀಕೃತವಾದ ಅರ್ಜಿಗಳನ್ನಾಧರಿಸಿ, ಅರ್ಹತೆ ಮತ್ತು ಮೀಸಲಾತಿಯನ್ವಯ ವಿಂಗಡಿಸಿ 1:10 ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪರಿಶೀಲನಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗಿರುತ್ತದೆ. ಈ ಪರಿಶೀಲನಾ ಪಟ್ಟಿಯ ಬಗ್ಗೆ ಆಕ್ಷೇಪಣೆ/ತಕರಾರು ಅರ್ಜಿಗಳನ್ನು ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಪರಿಶೀಲನಾ ಪಟ್ಟಿಯಲ್ಲಿ ಲಭ್ಯವಾದ ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸಿ ಆಯ್ಕೆ ಪಟ್ಟಿಯನ್ನು ಉಲ್ಲೇಖ (4) ರಂತೆ ಪ್ರಕಟಿಸಲಾಗಿದೆ.

ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ದಿನಾಂಕ: 17-10-2011 ರಂದು ಸಮಾಲೋಚನಾ ಸಭೆ ನಡೆಸಿ ಖಾಲಿ ಹುದ್ದೆಗಳ ಮಾಹಿತಿಯನ್ನು ನೀಡಿ ಅಭ್ಯರ್ಥಿಗಳು ಅಪೇಕ್ಷೆ ಪಟ್ಟಂತಹ ಕಾರ್ಯ ಸ್ಥಳವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.

ಆಯ್ಕೆಯಾಗಿರುವ ಅಭ್ಯರ್ಥಿಗಳ ಮೆರಿಟ್ ಮತ್ತು ವರ್ಗವಾರು ಆಧಾರದ ಮೇಲೆ, ಈ ಕೆಳಕಂಡ ಅಭ್ಯರ್ಥಿಯನ್ನು ಗ್ರಾಮಲೆಕ್ಕಿಗರ ಹುದ್ದೆಯ ವೇತನ ಶ್ರೇಣಿಯ 5800–100–6000–125–6500–150–7100–175–7800–200–8600–225–9500–250–10500 ರಲ್ಲಿ ನೇಮಕಾತಿ ಮಾಡಿ ಆದೇಶಿಸಿರುತ್ತದೆ.

ಅಭ್ಯರ್ಥಿಯ ಹೆಸರು	ತಂದೆಯ ಹೆಸರು	ವಿಳಾಸ	ನೇಮಕಾತಿ ಮಾಡಿರುವ ವೃತ್ತದ ಹೆಸರು
ನಂದಿನಿ.ಬಿ.	ಮಂಜುನಾಥ .ಬಿ.	ನಿಂಬಲಗೆರೆ ಗ್ರಾಮ ಮತ್ತು ಅಂಚೆ, ಕೂಡ್ಲಿಗಿ ತಾಲ್ಲೂಕು, ಬಳ್ಳಾರಿ–583136.	ಅರಕಲಗೂಡು ತಾಲ್ಲೂಕು, ಬೈಚನಹಳ್ಳಿ ವೃತ್ತ.

ಷರತ್ತುಗಳು

1. ಅಭ್ಯರ್ಥಿಯು ಈ ಆದೇಶ ತಲುಪಿದ 15 ದಿನಗಳೊಳಗೆ ಮೂಲ ದಾಖಲಾತಿಗಳೊಂದಿಗೆ ಸಂಬಂಧಿಸಿದ ತಹಶೀಲ್ದಾರರ ಸಮಕ್ಷಮದಲ್ಲಿ ವರದಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) 1977ರ ನಿಯಮ 18ರನ್ವಯ ನೇಮಕಾತಿಯನ್ನು ರದ್ದುಪಡಿಸಲಾಗುತ್ತದೆ.
2. ಅಭ್ಯರ್ಥಿಯು ವಾಸಿಸುತ್ತಿರುವ ಕ್ಷೇತ್ರಕ್ಕೆ ಸಂಬಂಧಿಸಿದ ಇಬ್ಬರು ಗಣ್ಯ ವ್ಯಕ್ತಿಗಳಿಂದ ನೀಡಲ್ಪಟ್ಟ ನಡತೆ ಪ್ರಮಾಣ ಪತ್ರಗಳನ್ನು ಹಾಜರುಪಡಿಸುವುದು.
3. ಈ ನೇಮಕಾತಿಯು ಅಭ್ಯರ್ಥಿಯು ಹಾಜರುಪಡಿಸಿರುವ ಪಿ.ಯು.ಸಿ. ಅಂಕ ಪಟ್ಟಿಯ ಸತ್ಯಾಪನೆಗೆ ಒಳಪಟ್ಟಿರುತ್ತದೆ.
4. ಅಭ್ಯರ್ಥಿಯು ಸಲ್ಲಿಸುವ ಮೂಲ ದಾಖಲಾತಿಗಳಲ್ಲಿ ತಪ್ಪು ಮಾಹಿತಿ ಅಥವಾ ಸುಳ್ಳು ಎಂದು ಕಂಡು ಬಂದಲ್ಲಿ ಅಂತಹವರ ಆಯ್ಕೆಯನ್ನು ರದ್ದುಪಡಿಸಲಾಗುತ್ತದೆ.
5. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ 2 ವರ್ಷಗಳ ಅವಧಿಯು ಪರಿವೀಕ್ಷಣೆ ಅವಧಿ (Probation Period) ಯಾಗಿರುತ್ತದೆ. ಈ ಅವಧಿಯಲ್ಲಿ (1) ಅಕೌಂಟ್ಸ್ ಲೋಯರ್ 2) ರೆವಿನ್ಯೂ ಲೋಯರ್ ಮತ್ತು ಕನ್ನಡ ಭಾಷಾ ಪರೀಕ್ಷೆ (SSLC ಯಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ತೆಗೆದುಕೊಳ್ಳದಿದ್ದಲ್ಲಿ) ಗಳಲ್ಲಿ ಉತ್ತೀರ್ಣರಾಗುವುದು. ತಪ್ಪಿದಲ್ಲಿ ಹಾಗೂ ಕೆಲಸ ಕಾರ್ಯಗಳು ತೃಪ್ತಿಕರವಾಗಿರದಿದ್ದಲ್ಲಿ ಸೇವೆಯಿಂದ ತೆಗೆದು ಹಾಕಲಾಗುವುದು.
6. ಅಭ್ಯರ್ಥಿಯು ಸೇವೆಗೆ ಹಾಜರಾಗಿ ಭಾರತ ಸಂವಿಧಾನದ ರೀತ್ಯಾ "ನಿಷ್ಠೆಯ ಪ್ರಮಾಣ ವಚನ ಸ್ವೀಕರಿಸುವುದು."
7. ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾಗುವ ಸಮಯದಲ್ಲಿ ಸರ್ಕಾರಿ ವೈದ್ಯರಿಂದ ಪಡೆದ ವೈದ್ಯಕೀಯ ಅರ್ಹತಾ ಪ್ರಮಾಣ ಪತ್ರವನ್ನು ಹಾಜರುಪಡಿಸುವುದು.
8. ಅಭ್ಯರ್ಥಿಯು ಸರ್ಕಾರದ ಆದೇಶ ನಂ. FD/SPL/04/PET/05 ದಿನಾಂಕ 31/03/2006 ರಂತೆ ಹೊಸ ನಿವೃತ್ತಿ ವೇತನ ಯೋಜನೆಗೆ ಒಳಪಟ್ಟಿರುತ್ತಾರೆ.
9. ಸರ್ಕಾರದ ಸುತ್ತೋಲೆ ಸಂ.ಕಂ.ಇ/54/ಬಿಎಸ್‌ಸಿ/2007, ದಿನಾಂಕ: 27/3/2007 ರನ್ವಯ ಅಂತರ ಜಿಲ್ಲಾ ವರ್ಗಾವಣೆಗೆ ಹಾಸನ ಜಿಲ್ಲೆಯಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಕಡ್ಡಾಯವಾಗಿ ಪೂರೈಸತಕ್ಕದ್ದು.
10. ಅಭ್ಯರ್ಥಿಗಳು, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966 ಹಾಗೂ ಕರ್ನಾಟಕ ನಾಗರೀಕ ಸೇವೆ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಗಳು 1957 ಹಾಗೂ ಕಾಲಕಾಲಕ್ಕೆ ಸರ್ಕಾರದಿಂದ ಹೊರಡಿಸಲಾಗುವ ಇತರೆ ನಿಯಮಾವಳಿಗಳಿಗೆ ಬದ್ಧರಾಗಿರುತ್ತಾರೆ.
11. ಅಭ್ಯರ್ಥಿಯು ರೂ. 1000/– ಭದ್ರತಾ ಠೇವಣಿಯನ್ನು ರಾಷ್ಟ್ರೀಯ ಉಳಿತಾಯ ಪತ್ರದ ಮೂಲಕ ಸಂಬಂಧಪಟ್ಟ ತಹಶೀಲ್ದಾರರಲ್ಲಿ ಹಾಜರುಪಡಿಸುವುದು ಹಾಗೂ ತಹಶೀಲ್ದಾರರು ಈ ಮೊತ್ತಕ್ಕೆ ಭದ್ರತಾ ಮುಚ್ಚಳಿಕೆ ಪತ್ರವನ್ನು ಪಡೆದು ಸರ್ಕಾರಕ್ಕೆ ಆಧಾರ ಮಾಡಿಕೊಳ್ಳುವುದು.
12. ಅಭ್ಯರ್ಥಿಯ ಜೇಷ್ಠತೆಯು ನೇಮಕಾತಿ ಪ್ರಾಧಿಕಾರದ ಉಲ್ಲೇಖ (4) ರಲ್ಲಿನ ಆಯ್ಕೆ ಪಟ್ಟಿಯಲ್ಲಿ ಪ್ರಸ್ತುತ ಇದ್ದಂತೆಯೇ ಇರತಕ್ಕದ್ದು ಹಾಗೂ ತದನಂತರ ಈ ಸಂಬಂಧ ಸರ್ಕಾರ ಹೊರಡಿಸುವ ಕಾನೂನು ತಿದ್ದುಪಡಿಗಳಿಗೆ ಒಳಪಟ್ಟಿರುತ್ತದೆ.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇಮಕಾತಿ ಸಮಿತಿ
ಹಾಸನ ಜಿಲ್ಲೆ, ಹಾಸನ.

ಪಿ.ಆರ್.93